ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಮಳೆಹಾನಿ ಪರಿಹಾರ ಬಿಡುಗಡೆ ಮಾಡಿರುವ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) -

44 (278) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) 2019ನೇ ವರ್ಷದಲ್ಲಿ ಕೊಡಗು ಜಿಲ್ಲೆಯಲ್ಲಿ ಸಂಭವಿಸಿದ ಪ್ರವಾಹ ಹಾಗೂ ಭೂಕುಸಿತದಿಂದಾಗಿ ಆಗಿರುವ ಹಾನಿಯ ನಷ್ಟದ ಅಂದಾಜು ಮೊತ್ತವೆಷ್ಟು ;

(ಆ) 2019ನೇ ಸಾಲಿನಲ್ಲಿ ಮಳೆಹಾನಿ ಪರಿಹಾರವಾಗಿ ಜಿಲ್ಲೆಗೆ ಸರ್ಕಾರ ಘೋಷಣೆ ಮಾಡಿದ ಪರಿಹಾರದ ಮೊತ್ತವೆಷ್ಟು ;

(ಇ) ಈ ರೀತಿ ಘೋಷಣೆಯಾದ ಅನುದಾನದಲ್ಲಿ ಇದುವರೆಗೂ ಸರ್ಕಾರ ಬಿಡುಗಡೆ ಮಾಡಿದ ಹಣವೆಷ್ಟು ;

(ಈ) ಜಿಲ್ಲೆಯಲ್ಲಿ 2019ರಲ್ಲಿ ಮಳೆಹಾನಿ ಪರಿಹಾರವಾಗಿ ಇದುವರೆಗೂ ಎಷ್ಟು ಮನೆಗಳನ್ನು ನಿರ್ಮಾಣ ಮಾಡಿ ಸಂತ್ರಸ್ತರಿಗೆ ಹಸ್ತಾಂತರಿಸಲಾಗಿದೆ ;

(ಉ) 2019ರ ಮಳೆಹಾನಿಯ ಎಲ್ಲಾ ಸಂತ್ರಸ್ತರಿಗೆ ಮನೆಗಳನ್ನು ನಿರ್ಮಾಣ ಮಾಡಿಕೊಡಲಾಗಿದೆಯೇ ; ಇಲ್ಲದಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು ?